Akashvani : Bangalore
National Bulletin In Kannada
22.10.2024 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ೧೬ನೇ ಬ್ರಿಕ್ಸ್ ಶೃಂಗಸಭೆ; ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಸಭೆ
- ಆರನೇ ಭಾರತ-ಸಿಂಗಾಪುರ ರಕ್ಷಣಾ ಸಚಿವರ ಸಂವಾದ; ಸಿಂಗಾಪುರದ ರಕ್ಷಣಾ ಸಚಿವರೊಂದಿಗೆ ರಾಜನಾಥ್ ಸಿಂಗ್ ಮಾತುಕತೆ
- ಜಾರ್ಖಂಡ್ ವಿಧಾನಸಭೆಯ ಎರಡನೇ ಹಂತದ ಚುನಾವಣೆಗೆ ಅಧಿಸೂಚನೆ ಪ್ರಕಟ
- ಯುದ್ಧಪೀಡಿತ ಪ್ಯಾಲೆಸ್ತೀನ್‌ಗೆ ನೆರವಿನ ಹಸ್ತ ಚಾಚಿದ ಭಾರತ

<><*<><>*><>

ರಷ್ಯಾದ ಕಜಾನ್‌ನಲ್ಲಿ ಇಂದು ೧೬ನೇ ಬ್ರಿಕ್ಸ್ ಶೃಂಗಸಭೆಯ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗೆ ದ್ವಿಪಕ್ಷೀಯ ಸಭೆ ನಡೆಸಿದರು. ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ರಷ್ಯಾ-ಉಕ್ರೇನ್ ಸಂಘರ್ಷವನ್ನು ಶಾಂತಿಯುತ ರೀತಿಯಲ್ಲಿ ಪರಿಹರಿಸಬೇಕು ಎಂಬ ಭಾರತದ ನಿಲುವನ್ನು ಪುನರುಚ್ಚರಿಸಿದರು. ಪ್ರದೇಶದಲ್ಲಿ ಶಾಂತಿ ಮತ್ತು ಸ್ಥಿರತೆಯನ್ನು ಭಾರತ ಸದಾ ಬೆಂಬಲಿಸುತ್ತದೆ ಎಂದು ಅವರು ಹೇಳಿದರು.  ಈ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ಸಾಧ್ಯವಿರುವ ಎಲ್ಲ ಸಹಕಾರ ನೀಡಲು ಭಾರತ ಸಿದ್ಧವಿದೆ ಎಂದು ಅವರು ತಿಳಿಸಿದರು.

ಧ್ವನಿ: ನರೇಂದ್ರ ಮೋದಿ, ಪ್ರಧಾನಿ

ಕಜಾನ್‌ನಲ್ಲಿ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗಿನ ಭೇಟಿಯ ಸಂದರ್ಭದಲ್ಲಿ ಅವರು, ತಮ್ಮ ಇತ್ತೀಚಿನ ರಷ್ಯಾ ಭೇಟಿಯು ಉಭಯ ದೇಶಗಳ ನಿಕಟ ಸಮನ್ವಯ ಮತ್ತು ಆಳವಾದ ಸ್ನೇಹವನ್ನು ಪ್ರತಿಬಿಂಬಿಸುತ್ತವೆ ಎಂದು ಹೇಳಿದರು.  ಭಾರತವು ಕಜಾನ್ ನಗರದೊಂದಿಗೆ ಆಳವಾದ ಮತ್ತು ಐತಿಹಾಸಿಕ ಸಂಬಂಧವನ್ನು ಹೊಂದಿದೆ. ಕಜಾನ್‌ನಲ್ಲಿ ಭಾರತದ ಹೊಸ ದೂತಾವಾಸ ಕಚೇರಿಯನ್ನು ತೆರೆಯುವುದರಿಂದ ಬಾಂಧವ್ಯ ಮತ್ತಷ್ಟು ಬಲಗೊಳ್ಳಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು. ಕಜಾನ್‌ನಲ್ಲಿ ತನ್ನ ದೂತಾವಾಸ ಕಚೇರಿವನ್ನು ತೆರೆಯುವ ಭಾರತದ ನಿರ್ಧಾರವನ್ನು ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಸ್ವಾಗತಿಸಿದ್ದಾರೆ. ಇದೇ ವೇಳೆ ಕರ್ನಾಟಕದ ಮೈಸೂರಿನ ವಿದ್ಯಾರ್ಥಿನಿ ಯೋಗಿತಾ, ಪ್ರಧಾನಿ ನರೇಂದ್ರ ಮೋದಿ ಅವರ ಕಜಾನ್ ಭೇಟಿಯ ಕುರಿತು ತಮ್ಮ ಅನಿಸಿಕೆಯನ್ನು ಆಕಾಶವಾಣಿಯೊಂದಿಗೆ ಹಂಚಿಕೊಂಡಿದ್ದಾರೆ.

ಧ್ವನಿ: ಯೋಗಿತಾ

<><*<><>*><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ನವದೆಹಲಿಯಲ್ಲಿ ೨೦೨೩ರ ೫ನೇ ರಾಷ್ಟ್ರೀಯ ಜಲ ಪ್ರಶಸ್ತಿಗಳನ್ನು ಪ್ರದಾನ ಮಾಡಿದರು. ಒಂಬತ್ತು ವಿಭಾಗಗಳಲ್ಲಿ ೩೮ ವಿಜೇತರಿಗೆ ಪ್ರಶಸ್ತಿಗಳನ್ನು ವಿತರಿಸಲಾಯಿತು. ಇದರಲ್ಲಿ ಅತ್ಯುತ್ತಮ ರಾಜ್ಯ, ಅತ್ಯುತ್ತಮ ಜಿಲ್ಲೆ, ಅತ್ಯುತ್ತಮ ಗ್ರಾಮ ಪಂಚಾಯಿತಿ, ಅತ್ಯುತ್ತಮ ನಗರ ಸ್ಥಳೀಯ ಸಂಸ್ಥೆ, ಅತ್ಯುತ್ತಮ ನೀರು ಬಳಕೆದಾರರ ಸಂಘ ಮತ್ತು ಉತ್ತಮ ನಾಗರಿಕ ಸಮಾಜ ಸೇರಿವೆ. ಈ ಸಂದರ್ಭದಲ್ಲಿ ಮಾತನಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು, ಜಲ ಜೀವನ್ ಮಿಷನ್ ಅಡಿಯಲ್ಲಿ ದೇಶಾದ್ಯಂತ ಶೇಕಡ ೭೮ ಕ್ಕೂ ಹೆಚ್ಚು ಗ್ರಾಮೀಣ ಕುಟುಂಬಗಳಿಗೆ ನಲ್ಲಿ ನೀರಿನ ಸಂಪರ್ಕವನ್ನು ಕೇಂದ್ರ ಸರ್ಕಾರ ನೀಡಿದೆ ಎಂದು ಹೇಳಿದರು. ೨೦೧೯ ರಲ್ಲಿ ಯೋಜನೆಯನ್ನು ಪ್ರಾರಂಭಿಸಿದಾಗ, ಕೇವಲ ೧೭ ಪ್ರತಿಶತದಷ್ಟು ಗ್ರಾಮೀಣ ಕುಟುಂಬಗಳಿಗೆ ಮಾತ್ರ ಸುರಕ್ಷಿತ ನೀರು ಲಭ್ಯವಿತ್ತು. ಜಲ ಜೀವನ್ ಮಿಷನ್‌ನಿಂದಾಗಿ ಗ್ರಾಮೀಣ ಪ್ರದೇಶದಲ್ಲಿ ವಾಸಿಸುವ ಜನರ ಜೀವನದಲ್ಲಿ ಗಮನಾರ್ಹ ಸುಧಾರಣೆಯಾಗಿದೆ ಎಂದರು. ಅತ್ಯುತ್ತಮ ರಾಜ್ಯ ವಿಭಾಗದಲ್ಲಿ ಒಡಿಶಾಗೆ ಪ್ರಥಮ ಮತ್ತು ಉತ್ತರ ಪ್ರದೇಶಕ್ಕೆ ದ್ವಿತೀಯ ಬಹುಮಾನ ಲಭಿಸಿದೆ. ಗುಜರಾತ್ ಮತ್ತು ಪುದುಚೇರಿ ಜಂಟಿಯಾಗಿ ಮೂರನೇ ಸ್ಥಾನ ಗಳಿಸಿವೆ.

<><*<><>*><>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ನವದೆಹಲಿಯಲ್ಲಿ ಇಂದು ಸಿಂಗಾಪುರದ ರಕ್ಷಣಾ ಸಚಿವ ಡಾ.ಎನ್‌ಜಿ ಇಂಗ್ ಹೆನ್ ಅವರೊಂದಿಗೆ ಆರನೇ ಭಾರತ-ಸಿಂಗಾಪುರ ರಕ್ಷಣಾ ಸಚಿವರ ಸಂವಾದದ ಸಹ-ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ರಾಜನಾಥ್ ಸಿಂಗ್, ಶೃಂಗಸಭೆಯಲ್ಲಿ ಉಭಯ ದೇಶಗಳ ಕಾರ್ಯತಂತ್ರದ ಪಾಲುದಾರಿಕೆಯು, ಎರಡು ದೇಶಗಳ ನಿಕಟತೆ ಬಲಗೊಳ್ಳುತ್ತಿರುವುದಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದ್ದಾರೆ. ಸಿಂಗಾಪುರವು ಆರ್ಥಿಕ ಸಹಕಾರ, ಸಾಂಸ್ಕೃತಿಕ ಸಂಬಂಧಗಳನ್ನು ಉತ್ತೇಜಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ ಮತ್ತು ದೇಶದ ಸಂಸ್ಥೆಗಳೊಂದಿಗೆ ಕಾರ್ಯತಂತ್ರದ ಸಂಪರ್ಕವನ್ನು ಅಭಿವೃದ್ಧಿಪಡಿಸಿದೆ ಎಂದರು. ಉಭಯ ದೇಶಗಳ ದ್ವಿಪಕ್ಷೀಯ ರಕ್ಷಣಾ ಸಹಭಾಗಿತ್ವದ ಬಗ್ಗೆ ಚರ್ಚಿಸಿದ ಸಚಿವ ರಾಜನಾಥ್ ಸಿಂಗ್, ರಕ್ಷಣಾ ಸಹಕಾರವನ್ನು ಮತ್ತಷ್ಟು ಹೆಚ್ಚಿಸಲು ಭಾರತ ಬದ್ಧವಾಗಿದೆ ಎಂದು ಹೇಳಿದರು. ಸಿಂಗಾಪುರವು, ಭಾರತದ ’ಆಕ್ಟ್ ಈಸ್ಟ್’ ನೀತಿಯ ಪ್ರಮುಖ ಆಧಾರಸ್ತಂಭವಾಗಿದೆ ಮತ್ತು ಇಂಡೋ-ಪೆಸಿಫಿಕ್ ದೃಷ್ಟಿಕೋನದ ಪ್ರಮುಖ ಪಾಲುದಾರ ರಾಷ್ಟ್ರವಾಗಿದೆ. ಉಭಯ ದೇಶಗಳ ನಡುವಿನ ರಕ್ಷಣಾ ಮತ್ತು ಭದ್ರತಾ ಪಾಲುದಾರಿಕೆಯು ಇಂಡೋ-ಪೆಸಿಫಿಕ್ ಪ್ರದೇಶದಲ್ಲಿ ಸ್ಥಿರತೆಯ ಪ್ರಮುಖ ಅಂಶವಾಗಿದೆ ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

<><*<><>*><>

ಜಾರ್ಖಂಡ್‌ನಲ್ಲಿ ವಿಧಾನಸಭೆಯ ಎರಡನೇ ಹಂತದ ಚುನಾವಣೆಯ ೩೮ ವಿಧಾನಸಭಾ ಕ್ಷೇತ್ರಗಳಿಗೆ ಅಧಿಸೂಚನೆ ಹೊರಬಿದ್ದಿದ್ದು, ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಆರಂಭಗೊಂಡಿದೆ. ಎರಡನೇ ಹಾಗೂ ಕೊನೆಯ ಹಂತದ ಮತದಾನ ನವೆಂಬರ್ ೨೦ ರಂದು ನಡೆಯಲಿದೆ. ಇದೇ ೨೯ ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದ್ದು, ಇದೇ ೩೦ ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದೆ. ಉಮೇದುವಾರಿಕೆ ಹಿಂಪಡೆಯಲು ನವೆಂಬರ್ ೧ ಕಡೆಯ ದಿನವಾಗಿದೆ. ಮೊದಲ ಹಂತದ ಮತದಾನ ನವೆಂಬರ್ ೧೩ ರಂದು

ನಡೆಯಲಿದೆ. ನವೆಂಬರ್ ೨೩ ರಂದು ಎರಡೂ ಹಂತಗಳ ಮತ ಎಣಿಕೆ ನಡೆಯಲಿದೆ. ಈಗಾಗಲೇ ಮೊದಲ ಹಂತದ ಚುನಾವಣೆಗೆ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಮುಂದುವರೆದಿದ್ದು, ಇದುವರೆಗೆ ೨೫ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ. ಈ ಮಧ್ಯೆ, ಮಹಾರಾಷ್ಟ್ರ ವಿಧಾನಸಭಾ ಚುನಾವಣೆಗೆ ಇಂದು ಅಧಿಸೂಚನೆ ಹೊರ ಬಿದ್ದಿದೆ. ನವೆಂಬರ್ ೨೦ ರಂದು ಎಲ್ಲಾ ೨೮೮ ವಿಧಾನಸಭಾ ಕ್ಷೇತ್ರಗಳಿಗೆ ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ನಾಮಪತ್ರ ಸಲ್ಲಿಸಲು ಇದೇ ೨೯ ಕೊನೆಯ ದಿನವಾಗಿದೆ.

<><*<><>*><>

೪ಜಿ ಅನಾವರಣಗೊಂಡ ನಂತರ, ಭಾರತ್ ಸಂಚಾರ್ ನಿಗಮ್ ಲಿಮಿಟೆಡ್‌ನ ಚಂದಾದಾರರ ಸಂಖ್ಯೆ ಕಳೆದ ಆರು ತಿಂಗಳಲ್ಲಿ ೭೫ ಲಕ್ಷದಿಂದ ೧ ಕೋಟಿ ೮೦ ಲಕ್ಷಕ್ಕೆ ಏರಿಕೆಯಾಗಿದೆ ಎಂದು ಕೇಂದ್ರ ಸಂವಹನ ಸಚಿವ ಜ್ಯೋತಿರಾದಿತ್ಯ ಸಿಂಧಿಯಾ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ಬಿಎಸ್‌ಎನ್‌ಎಲ್ ನ ಹೊಸ ಲೋಗೋ ಮತ್ತು ಏಳು ಹೊಸ ಸೇವೆಗಳನ್ನು ಅನಾವರಣಗೊಳಿಸಿದ ನಂತರ ಮಾತನಾಡಿದ ಸಚಿವರು, ತನ್ನದೇ ಆದ ೪ಜಿ ದೂರಸಂಪರ್ಕ ಜಾಲವನ್ನು ಅಭಿವೃದ್ಧಿಪಡಿಸುವ ವಿಶ್ವದ ಆರು ದೇಶಗಳಲ್ಲಿ ಭಾರತವೂ ಸೇರಿದ್ದು, ಶೀಘ್ರದಲ್ಲೇ ೫ಜಿ ದೂರಸಂಪರ್ಕ ಜಾಲಕ್ಕೆ ಮೇಲ್ದರ್ಜೆ ಹೊಂದಲಿದೆ ಎಂದು ಹೇಳಿದರು.

<><*<><>*><>

ಯುದ್ಧಪೀಡಿತ ಪ್ಯಾಲೆಸ್ತೀನ್‌ಗೆ ವಿಶ್ವಸಂಸ್ಥೆಯ ಪರಿಹಾರ ಕ್ರಮಗಳ ವೇದಿಕೆಯ ಮೂಲಕ ಭಾರತ ಮಾನವೀಯ ನೆರವಿನ ಹಸ್ತ ಚಾಚಿದೆ. ಈ ಕುರಿತು ಮಾಹಿತಿ ನೀಡಿದ ವಿದೇಶಾಂಗ ವ್ಯವಹಾರಗಳ ವಕ್ತಾರ ರಣಧೀರ್ ಜೈಸ್ವಾಲ್, ಪ್ಯಾಲೆಸ್ತೀನ್‌ಗೆ ಮೊದಲ ಹಂತದಲ್ಲಿ ೩೦ ಟನ್ ವೈದ್ಯಕೀಯ ಹಾಗೂ ಆಹಾರ ಸಾಮಗ್ರಿಗಳನ್ನು ರವಾನಿಸಲಾಗಿದೆ ಎಂದು ತಿಳಿಸಿದ್ದಾರೆ. ಮಾನವೀಯ ನೆರವು ನೀಡುವ ದೃಷ್ಟಿಕೋನದಿಂದ ಅಗತ್ಯ ಔಷಧಗಳು, ವೈದ್ಯಕೀಯ ಸಲಕರಣೆ ಹಾಗೂ ಪುಷ್ಟಿದಾಯಕ ಬಿಸ್ಕತ್‌ಗಳನ್ನು ಕಳುಹಿಸಲಾಗಿದೆ ಎಂದು ಹೇಳಿದ್ದಾರೆ.

<><*<><>*><>

೨೦೨೯ ರ ವೇಳೆಗೆ ಪ್ರವಾಸೋದ್ಯಮ ಕ್ಷೇತ್ರವು ಪ್ರಸ್ತುತ ೨೫೦ ಶತಕೋಟಿ ಅಮೆರಿಕನ್ ಡಾಲರ್‌ಗಳಿಂದ ೫೦೦ ಶತಕೋಟಿ ಅಮೆರಿಕನ್ ಡಾಲರ್‌ಗೆ ಬೆಳೆಯಲಿದೆ ಎಂದು ಕೇಂದ್ರ ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಭರವಸೆ ವ್ಯಕ್ತಪಡಿಸಿದರು. ಪಾಟ್ನಾದಲ್ಲಿ ಎರಡು ದಿನಗಳ ಪ್ರಯಾಣ ಮತ್ತು ಪ್ರವಾಸೋದ್ಯಮ ಮೇಳ-೨೦೨೪ ರ ಉದ್ಘಾಟನಾ ಸಮಾರಂಭವನ್ನುದ್ದೇಶಿಸಿ ಮಾತನಾಡಿದ ಅವರು, ಪ್ರವಾಸೋದ್ಯಮ ಕ್ಷೇತ್ರವು ಅದರ ಪ್ರಸ್ತುತ ಬೆಳವಣಿಗೆಯ ದರದೊಂದಿಗೆ ಭಾರತದ ಆರ್ಥಿಕತೆಯ ಬೆಳವಣಿಗೆಯ ಎಂಜಿನ್ ಆಗುವ ಸಾಮರ್ಥ್ಯವನ್ನು ಹೊಂದಿದೆ ಎಂದರು. ಕೇಂದ್ರ ಬಜೆಟ್‌ನಲ್ಲಿ ದೀರ್ಘಾವಧಿಯ ಮೂಲಸೌಕರ್ಯ ಹೂಡಿಕೆ ನಿಧಿಯಲ್ಲಿ ಪ್ರವಾಸೋದ್ಯಮ ಕ್ಷೇತ್ರವನ್ನು ಸೇರಿಸಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಗಜೇಂದ್ರ ಸಿಂಗ್ ಶೇಖಾವತ್ ಧನ್ಯವಾದ ಅರ್ಪಿಸಿದರು. ಈ ಸಂದರ್ಭದಲ್ಲಿ ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಉಪಸ್ಥಿತರಿದ್ದರು.

<><*<><>*><>

ಮುಂಬರುವ ಭವಿಷ್ಯದಲ್ಲಿ ದೇಶದ ಎಲ್ಲಾ ೮ ಕೋಟಿ ಹಾಲು ಉತ್ಪಾದಕ ರೈತರನ್ನು ಸಹಕಾರಿ ಮೂಲಸೌಕರ್ಯಕ್ಕೆ ಸಂಪರ್ಕಿಸುವ ಗುರಿಯೊಂದಿಗೆ ಭಾರತ, ಎರಡನೇ ಶ್ವೇತ ಕ್ರಾಂತಿಗೆ ಸಜ್ಜಾಗುತ್ತಿದೆ ಎಂದು ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಹೇಳಿದ್ದಾರೆ. ಗುಜರಾತ್‌ನ ಆನಂದ್‌ನಲ್ಲಿಂದು ರಾಷ್ಟ್ರೀಯ ಡೈರಿ ಅಭಿವೃದ್ಧಿ ಮಂಡಳಿ- ಎನ್‌ಡಿಡಿಬಿ ವಜ್ರಮಹೋತ್ಸವ ಆಚರಣೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಸ್ತುತ ಹಾಲು ಉತ್ಪಾದಕರಲ್ಲಿ ಕೇವಲ ೧ ಕೋಟಿ ೫೦ ಲಕ್ಷ ರೈತರು ಸಹಕಾರಿ ಸಂಘಗಳೊಂದಿಗೆ ಸಂಪರ್ಕ ಹೊಂದಿದ್ದು, ಅವರಲ್ಲಿ ಹೆಚ್ಚಿನವರು ಇನ್ನೂ ಶೋಷಣೆಯಿಂದ ಬಳಲುತ್ತಿದ್ದಾರೆ ಎಂದರು. ಭಾರತದ ಡೈರಿ ವಲಯವು ವಾರ್ಷಿಕ ೬ ಪ್ರತಿಶತದ ದರದಲ್ಲಿ ಬೆಳೆಯುತ್ತಿದೆ. ಇದು ವಿಶ್ವದ ಸರಾಸರಿಗಿಂತ ಹೆಚ್ಚಾಗಿದೆ. ಮುಂದಿನ ಐದು ವರ್ಷಗಳಲ್ಲಿ ದೇಶದಲ್ಲಿ ೨ ಲಕ್ಷ ಸಹಕಾರಿ ಸಂಸ್ಥೆಗಳನ್ನು ಸ್ಥಾಪಿಸಲು ಕೇಂದ್ರ ಸರ್ಕಾರದ ಯೋಜನೆಗಳನ್ನು ರೂಪಿಸಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಎನ್‌ಡಿಡಿಬಿ ಯ ರೈತ ಕೇಂದ್ರಿತ ಯೋಜನೆಗಳನ್ನು ಸಚಿವ ಅಮಿತ್ ಶಾ ಅನಾವರಣಗೊಳಿಸಿದರು ಮತ್ತು ಎನ್‌ಡಿಡಿಬಿಯ ಹೊಸ ಆವರಣವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಕೇಂದ್ರ ಡೈರಿ ಸಚಿವ ರಾಜೀವ್ ರಂಜನ್ ಸಿಂಗ್, ಉಪಸ್ಥಿತರಿದ್ದರು.

<><*<><>*><>

ಮುಂದಿನ ಎರಡು ದಿನಗಳಲ್ಲಿ ದೇಶದ ಪೂರ್ವ ಮತ್ತು ದಕ್ಷಿಣದ ಕೆಲ ಭಾಗಗಳಲ್ಲಿ ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಒಡಿಶಾ, ಕೇರಳ, ಮಾಹೆ, ಕರಾವಳಿ ಮತ್ತು ಕರ್ನಾಟಕದ ದಕ್ಷಿಣ ಒಳನಾಡಿನಲ್ಲಿ ಹಾಗೂ ಕಡಲ ತೀರದಲ್ಲಿ ನಾಳೆಯವರೆಗೆ ಭಾರೀ ಮಳೆಯಾಗಲಿದ್ದು, ಇಂದು ಮತ್ತು ನಾಳೆ ತಮಿಳುನಾಡು, ಪುದುಚೇರಿ ಮತ್ತು ಕಾರೈಕಲ್‌ನಲ್ಲಿ ಮಳೆಯಾಗುವ ಸಾಧ್ಯತೆ ಇದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೩೫ ಕ್ಕೆ <>*><>**